# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಸ.ಅ/ವಾ–164//2021–22 ದಿನಾಂಕ: 11–04–2022

### ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020–21, ದಿನಾಂಕ: 21–09–2020ರ ಆದೇಶದಂತೆ ದಿನಾಂಕ: 08–04–2022 ಶುಕ್ರವಾರ ವಾರ್ಡ್ ಸಂಖ್ಯೆ: 164, ವಿದ್ಯಾಪೀಠದ ವಾರ್ಡ್ ಕಛೇರಿಯಲ್ಲಿ ನಡೆದ ಏಪ್ರಿಲ್ ತಿಂಗಳ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ

ಸಮಯ : ಪೂರ್ವಾಹ್ನ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ವಿಜಯ್‌ಕುಮಾರ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 3 | ಶ್ರೀ ಕೃಷ್ಣಮೂರ್ತಿ.ಟಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್–164, ವಿದ್ಯಾಪೀಠ |
| 4 | ಡಾ॥ ಪುಷ್ಮಿತ | ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) |
| 5 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್–164, ವಿದ್ಯಾಪೀಠ |
| 6 | ಶ್ರೀ ಎಂ. ಸುರೇಶ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 164 |
| 7 | ಶ್ರೀ ಸುನಿಲ್ | ಹಿರಿಯ ಆರೋಗ್ಯ ಪರಿವೀಕ್ಷಕರು (ಬಸವನಗುಡಿ ವಲಯ) |
| 8 | ಶ್ರೀ ಕೆ. ಮುನಿರಾಜು | ಕಿರಿಯ ಅಭಿಯಂತರರು (ಬೆಸ್ಕಾಂ) |
| 9 | ಶ್ರೀ ಕುಮಾರ್ | ಸಾರ್ವಜನಿಕರು |
| 10 | ಶ್ರೀ ಜಯರಾಮೇ ಗೌಡ | ಸ್ಯಾನಿಟರಿ ಧಫೇದಾರ್ |
| 11 | ಶ್ರೀ ರಾಧಕೃಷ್ಣ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |
| 12 | ಶ್ರೀ ಯತಿರಾಜ್ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ ಹಿಂದಿನ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

7. ವಾರ್ಡ್ ವ್ಯಾಪ್ತಿಯ ಕಾಮಗಾರಿಗಳ ಬಗ್ಗೆ ಉಲ್ಲೇಖಿಸುತ್ತಾ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಗುಂಡಿಗಳನ್ನು ಮುಚ್ಚುವ ಕೆಲಸ ಪ್ರಗತಿಯಲ್ಲಿರುವುದಾಗಿಯೂ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ವಿನಾಯಕನಗರ ಬಡಾವಣೆಯಲ್ಲಿ ರಸ್ತೆ ಮತ್ತು ಚರಂಡಿ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ ಎಂದು ಸಭೆಗೆ ತಿಳಿಸಿರುತ್ತಾರೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿರುವ ಮರಗಳಲ್ಲಿ ದುರ್ಬಲ ರೆಂಬೆಕೊಂಬೆಗಳನ್ನು ಗುರುತಿಸಿ ಅರಣ್ಯಾಧಿಕಾರಿಗಳಿಗೆ ತೆರವುಗೊಳಿಸಲು ತಿಳಿಸಿರುವುದಾಗಿ ಸಭೆಗೆ ವರದಿ ನೀಡಿರುತ್ತಾರೆ. ಹೊಸದಾಗಿ ಗುರ್ತಿಸಲಾದ ರಸ್ತೆ ಗುಂಡಿಗಳನ್ನು ಜಲಮಂಡಳಿ ಹಾಗೂ ಬೆಸ್ಕಾಂ ಹಾಗೂ ಇನ್ನಿತರ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳಿಂದ ಪರಿವೀಕ್ಷಣೆ ಮಾಡಿದ ನಂತರ ರಸ್ತೆ ಗುಂಡಿಗಳನ್ನು ಮುಚ್ಚಲು ಅಗತ್ಯ ಕ್ರಮಗಳನ್ನು ತುರ್ತಾಗಿ ಕೈಗೊಳ್ಳುವಂತೆ ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ಸೂಚಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಸಭೆಯಲ್ಲಿ ಚರ್ಚಿಸಿದ್ದು, ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.

1. ವಾರ್ಡ್ ವ್ಯಾಪ್ತಿಯಲ್ಲಿರುವ ಹಳೆಯ ಟ್ರಾನ್ಸ್‌ಫಾರ್ಮರ್‌ಗಳನ್ನು ಹೊಸ ಟ್ರಾನ್ಸ್‌ಫಾರ್ಮರ್‌ಗಳಿಗೆ ಬದಲಾಯಿಸಲು ಬೆಸ್ಕಾಂ ಅಧಿಕಾರಿಗಳೊಂದಿಗೆ ಜಂಟಿ ತಪಾಸಣೆ ಮಾಡಲು ಸಭೆಯಲ್ಲಿ ಅಧ್ಯಕ್ಷರು ಸೂಚಿಸಿರುತ್ತಾರೆ. ವಾರ್ಡ್ ವ್ಯಾಪ್ತಿಯಲ್ಲಿ ಬರುವ ಬಿಬಿಎಂಪಿ ಕಟ್ಟಡಗಳ ವಿದ್ಯುತ್ ಬಿಲ್ಲನ್ನು ನೀಡಲು ಅಧ್ಯಕ್ಷರು ಸಭೆಯಲ್ಲಿ ಹಾಜರಿದ್ದ ಬೆಸ್ಕಾಂನ ಕಿರಿಯ ಅಭಿಯಂತರರಾದ ಶ್ರೀ ಮುನಿರಾಜು ರವರಿಗೆ ತಿಳಿಸಿರುತ್ತಾರೆ. ಅಧಿಕಾರಿಗಳು ಸಹ ವಿವರವನ್ನು ಮುಂದಿನ ಸಭೆಗೆ ನೀಡುವುದಾಗಿ ತಿಳಿಸಿರುತ್ತಾರೆ. ಮಳೆಗಾಲವಿರುವುದರಿಂದ ವಿದ್ಯುತ್ ತಂತಿಗಳಿಗೆ ತೊಂದರೆ ಆಗುತ್ತಿರುವ ಮರದ ರೆಂಬೆಕೊಂಬೆಗಳನ್ನು ತೆರವುಗೊಳಿಸಿಕೊಡಲು ಅಧಿಕಾರಿಗಳು ತಿಳಿಸಿರುತ್ತಾರೆ.
2. ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಿಭಾಗದಿಂದ ಹಾಜರಿದ್ದ ಸೂಪರ್‌ವೈಸರ್ ಶ್ರೀ ರಾಧಕೃಷ್ಣ ರವರು ಘನತ್ಯಾಜ್ಯ ವಿಭಾಗದಿಂದ ತ್ಯಾಜ್ಯ ನಿರ್ವಹಣೆ ಸಮರ್ಪಕವಾಗಿ ನಿರ್ವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ. ಮಳೆಗಾಲವಾದ್ದರಿಂದ ರಸ್ತೆ ಬದಿಯ ತೋಳು ಚರಂಡಿಯನ್ನು ಸ್ವಚ್ಛಗೊಳಿಸುತ್ತಿರುವುದಾಗಿ ಸಭೆಗೆ ತಿಳಿಸಿರುತ್ತಾರೆ.
3. ವಾರ್ಡ್ ವ್ಯಾಪ್ತಿಯ ಚೆನ್ನಮ್ಮನಕೆರೆ ಅಚ್ಚುಕಟ್ಟು ಪ್ರದೇಶದಲ್ಲಿ ಕುಡಿಯುವ ನೀರು ಮಲಿನಗೊಳ್ಳುತ್ತಿರುವುದರಿಂದ ಅನೇಕ ರಸ್ತೆ ಅಗೆತ ಮಾಡಿರುವ ಬಗ್ಗೆ ಸಂಬಂಧಪಟ್ಟ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಭಿಯಂತರರ ಗಮನಕ್ಕೆ ತರಲಾಗಿ, ಸಂಬಂಧಿಸಿದ ಅಧಿಕಾರಿಗಳು ಅಗೆತ ಮಾಡಿರುವ ರಸ್ತೆಗಳನ್ನು ಪುನರ್ ನಿರ್ಮಾಣ ಮಾಡಿಕೊಡುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ ಮತ್ತು ಮುಂದೆ ಜಲಮಂಡಳಿಗೆ ಸಂಬಂಧಿಸಿದ ಯಾವುದೇ ರಸ್ತೆ ಅಗೆತ ಕಾಮಗಾರಿಗಳನ್ನು ಕೈಗೊಳ್ಳುವ ಮುನ್ನ ಮಾಹಿತಿಯನ್ನು ನೀಡಿ ಅಗತ್ಯವಿದ್ದಲ್ಲಿ ಮಾತ್ರ ರಸ್ತೆ ಅಗೆತವನ್ನು ಕೈಗೊಂಡು ಪುನರ್ ನಿರ್ಮಾಣ ಮಾಡಿಕೊಡಬೇಕಾಗಿ ಸಂಬಂಧಪಟ್ಟ ಅಧಿಕಾರಿಗಳಿಗೆ ಅಧ್ಯಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.
4. ಸಭೆಯಲ್ಲಿ ಹಾಜರಿದ್ದ ಕಂದಾಯ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ಮತದಾರರ ನೋಂದಣಿ ಅಭಿಯಾನದ ಹಮ್ಮಿಕೊಂಡಿದ್ದು, ಅಭಿಯಾನದಲ್ಲಿ ಹೊಸದಾಗಿ ಮತದಾರರನ್ನು ಸೇರ್ಪಡೆಗೊಳಿಸಲು ಅರ್ಜಿಗಳನ್ನು ಸ್ವೀಕರಿಸಲಾಗುತ್ತದೆ ಹಾಗೂ ಹಾಲಿ ಇರುವ ಮತದಾರರ ವರ್ಗಾವಣೆ ಮತ್ತು ಮರಣ ಹೊಂದಿರುವ ಮತದಾರರನ್ನು ಪಟ್ಟಿಯಿಂದ ತೆಗೆಯುವ ಕಾರ್ಯ ಮಾಡಲಾಗುತ್ತದೆ ಎಂದು ಸಭೆಯಲ್ಲಿ ಕಂದಾಯ ಅಧಿಕಾರಿಗಳು ವರದಿ ನೀಡಿರುತ್ತಾರೆ.
5. ಸಭೆಯಲ್ಲಿ ಹಾಜರಿದ್ದ ಶ್ರೀ ಕುಮಾರ್, ಸಾರ್ವಜನಿಕರು ರವರು ವಾರ್ಡ್ ವ್ಯಾಪ್ತಿಯಲ್ಲಿ ಬೀಳುವ ಹಂತದಲ್ಲಿರುವ ಮರದ ರೆಂಬೆಕೊಂಬೆಗಳನ್ನು ಗುರುತಿಸಿ ತೆರವುಗೊಳಿಸಲು, ಕೆಲವು ರಸ್ತೆಗಳಲ್ಲಿ ರಸ್ತೆ ಬದಿಯ ಚರಂಡಿಗಳಲ್ಲಿ ಮಳೆನೀರು ಸರಾಗವಾಗಿ ಹರಿಯದೆ ಇರುವುದರಿಂದ ಅಂತಹ ಚರಂಡಿಗಳನ್ನು ಸ್ವಚ್ಛಗೊಳಿಸಬೇಕೆಂದು ಸಭೆಯಲ್ಲಿ ನೊಡಲ್ ಅಧಿಕಾರಿಗಳಿಗೆ ಸಲಹೆಗಳನ್ನು ನೀಡಿರುತ್ತಾರೆ.
6. ವೈದ್ಯಾಧಿಕಾರಿಗಳು, ಸಿ.ಟಿ ಬೆಡ್ ಆರೋಗ್ಯ ಕೇಂದ್ರ ಮತ್ತು ವಿದ್ಯಾಪೀಠ ಆರೋಗ್ಯ ಕೇಂದ್ರ ರವರು ಸಭೆಯಲ್ಲಿ ಹಾಜರಿದ್ದು, ಆರೋಗ್ಯ ಕೇಂದ್ರದಲ್ಲಿ ಮಾರ್ಚ್ ಮಾಹೆಯಲ್ಲಿ ಸುಮಾರು 4000 ಲಸಿಕೆಗಳನ್ನು ಹಾಕಲಾಗಿದ್ದು, ಕೋವಿಡ್ ಟೆಸ್ಟ್‌ಗಳನ್ನು ಹಾಲಿ ಆರೋಗ್ಯ ಕೇಂದ್ರದಲ್ಲಿ ನಡೆಸುತ್ತಿಲ್ಲವೆಂದು ತಿಳಿಸಿರುತ್ತಾರೆ. ಮುಂದುವರೆದ ವೈದ್ಯಾಧಿಕಾರಿಗಳು, ವಿದ್ಯಾಪೀಠದ ಆರೋಗ್ಯ ಕೇಂದ್ರ ರವರು ಮಾರ್ಚ್ ಮಾಹೆಯಲ್ಲಿ ಒಟ್ಟು 2660 ಲಸಿಕೆಯನ್ನು ಹಾಕಲಾಗಿದ್ದು, ಪ್ರತಿ ವಾರವು ಕೋವಿಶೀಲ್ಡ್ ಲಸಿಕೆಯನ್ನು ಸೋಮವಾರ, ಮಂಗಳವಾರ ಮತ್ತು ಬುಧವಾರಗಳಂದು ಕೋವ್ಯಾಕ್ಸಿನ್ ಲಸಿಕೆಯನ್ನು ಶುಕ್ರವಾರದಂದು ಹಾಗೂ ಮಕ್ಕಳಿಗೆ ನೀಡಲಾಗುವ ಕೋಬ್ರೆವ್ಯಾಕ್ಸ್ ಲಸಿಕೆಯನ್ನು ಪ್ರತಿ ಸೋಮವಾರದಂದು ನೀಡಲಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿರುತ್ತಾರೆ.